**1ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ ನ್ಯಾಯಾಲಯ,**
**ನಂಜನಗೂಡು**

**ಸಿ.ಸಿ.ಸಂಖ್ಯೆ:1469/2017**

**ಫಿರ್ಯಾದಿ : ಬಿಳಿಗೆರೆ ಆರಕ್ಷಕ ಠಾಣೆ**

**ವಿರುದ್ಧ**

**ಆರೋಪಿ : ಚಂದ್ರಶೇಖರ, 29 ವರ್ಷ,**
**ಬಿನ್ ನರಸಿಂಹಯ್ಯ ,**
**ಕೆಎ-07-5353 ಬಸ್ಸಿನ ಚಾಲಕ,**
**ಬಿಳಿಗೆರೆ ಗ್ರಾಮ, ನಂಜನಗೂಡು ತಾಲ್ಲೂಕು.**

**: ಆಪಾದನೆ :**

**ದಿನಾಂಕ : 04.08.2017 ರಂದು ಬೆಳಿಗ್ಗೆ 08-15 ಗಂಟೆ ಸಮಯದಲ್ಲಿ ಬಿಳಿಗೆರೆ ಪೊಲೀಸ್ ಠಾಣೆ ವ್ಯಾಪ್ತಿಗೆ ಸೇರಿದ ಹೊಸಕೋಟೆ ಗ್ರಾಮದಿಂದ ಒಂದೂವರೆ ಕಿಲೋಮೀಟರ್ ಮೈಸೂರು ಕಡೆಗೆ ದೂರದಲ್ಲಿರುವ ಶ್ರೀ.ಮುಂಡಾ ಬಸಪ್ಪಸ್ವಾಮಿ ದೇವಸ್ಥಾನದ ಮುಂಭಾಗ ಸುತ್ತೂರು - ಮೈಸೂರು ಮುಖ್ಯ ರಸ್ತೆಯಲ್ಲಿ ಆರೋಪಿಯಾದ ನೀವು ನಿಮ್ಮ ಬಾಬ್ತು ಕೆಎ-07-5353 ರ ವೀರಭದ್ರೇಶ್ವರ ಖಾಸಗಿ ಬಸ್ಸನ್ನು ಸುತ್ತೂರು ಕಡೆಯಿಂದ ಮೈಸೂರು ಕಡೆಗೆ ಓಡಿಸಿಕೊಂಡು ಹೋಗುತ್ತಿದ್ದು ಬಸ್ಸಿನಿಂದ ಚಿಕ್ಕತಾಯಮ್ಮರವರನ್ನು ಇಳಿಸಲು ನಿಲ್ಲಿಸಿದ್ದು , ಚಿಕ್ಕತಾಯಮ್ಮರವರು ಬಸ್ಸಿನ ಮುಂಭಾಗ ಎಡಭಾಗದ ಡೋರಿನ ಬಳಿ ಇಳಿಯುವಷ್ಟರವಲ್ಲಿ ಬಸ್ಸನ್ನು ಚಾಲನೆ ಮಾಡಿ ಮಾನವ ಪ್ರಾಣಕ್ಕೆ ಅಪಾಯವಾಗುವ ರೀತಿಯಲ್ಲಿ ಅತಿವೇಗ ಹಾಗೂ ಅಜಾಗರೂಕತೆಯಿಂದ ಓಡಿಸಿಕೊಂಡು ಹೋದ ಕಾರಣ ಭಾರತೀಯ ದಂಡ ಸಂಹಿತೆ ಕಲಂ.279 ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.**

**ಎರಡನೆಯದಾಗಿ, ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರಾದ ನೀವು ನಿಮ್ಮ ಬಾಬ್ತು ಕೆಎ-07-5353 ಬಸ್ಸನ್ನು ಅತಿವೇಗ ಮತ್ತು ನಿರ್ಲಕ್ಷತನದಿಂದ ಮುಂದಕ್ಕೆ ಓಡಿಸಿದ್ದರಿಂದ ಚಿಕ್ಕತಾಯಮ್ಮರವರು ಬಸ್ಸಿನಿಂದ ಕೆಳಗಡೆ ಬಿದ್ದಾಗ ಅವರ ತಲೆಗೆ ಹಾಗೂ ಎತರೆ ಕಡೆ ತೀವ್ರ ಸ್ವರೂಪದ ಗಾಯಗಳಾಗಿದ್ದು ಚಿಕಿತ್ಸೆಗಾಗಿ ಮೈಸೂರಿನ ಕೆ ಆರ್ ಆಸ್ಪತ್ರೆಗೆ ಕರೆದುಕೊಂಡು ಹೋಗುವಾಗ ದಿನಾಂಕ**

04.08.2017 ರಂದು ಬೆಳಿಗ್ಗೆ 10.15 ಗಂಟೆ ಸಮಯದಲ್ಲಿ ಮಾರ್ಗಮಧ್ಯೆ ಮೃತಪಟ್ಟ ಕಾರಣ ಭಾರತೀಯ ದಂಡ ಸಂಹಿತೆ ಕಲಂ 304 ಎ ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

ಕೊನೆಯದಾಗಿ, ಅದೇ ದಿನ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಯಾದ ನೀವು ಗಾಯಾಳುವಿಗೆ ಚಿಕಿತ್ಸೆ ಕೊಡಿಸದೆ, ಅಪಘಾತದ ಬಗ್ಗೆ ಪೊಲೀಸರಿಗೆ ಮಾಹಿತಿ ನೀಡದೆ ಹೊರಟು ಹೋದ ಕಾರಣ ಭಾರತೀಯ ಮೋಟಾರು ವಾಹನ ಕಾಯ್ದೆ 187 ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾ ದಿಸಲಾಗಿದೆ.

ಈ ಮೇಲ್ಕಂಡ ಆರೋಪಗಳ ಬಗ್ಗೆ ವಿಚಾರಣೆಗೆ ಈ ಕೆಳಕಂಡಂತೆ ಆದೇಶಿಸುತ್ತೇನೆ.

ಪ್ರಶ್ನೆ-1 ಃ ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ಓದಿ ಹೇಳಿದ್ದು ಅರ್ಥವಾಯಿತೇ?

ಉತ್ತರ ಃ

ಪ್ರಶ್ನೆ-2 ಃ ಸದರೀ ಆಪಾದನೆಗಳನ್ನು ಒಪ್ಪಿಕೊಳ್ಳುವೆಯೋ? ಅಥವಾ
ವಿಚಾರಣೆಯಾಗ ಬೇಕೋ?

ಉತ್ತರ ಃ

ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ನನ್ನ ಸಮಕ್ಷಮ ಓದಿ ಹೇಳಿ ಆತನ ಹೇಳಿಕೆಯನ್ನು ಪಡೆದುಕೊಂಡು ಸತ್ಯವಾಗಿದೆ ಎಂದು ದೃಢೀಕರಿಸುತ್ತೇನೆ.

ಸಹಿ/-

ದಿನಾಂಕ ಃ24.09.2019

1ನೇ ಹೆ.ಸಿ.ಜೆ. ಮತ್ತು ಜೆ.ಎಂ.ಎಫ್.ಸಿ.
ನಂಜನಗೂಡು